## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಸಾಲ ಮರುಪಾವತಿ (Loan Recovery amount) ಹಣದಲ್ಲಿ NMDFC ಮಾದರಿಯಲ್ಲಿ ವ್ಯಾಪಾರ / ಉದ್ದಿಮೆ ನೇರ ಸಾಲ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಓದಲಾಗಿದೆ:** ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಇವರ ಏಕ ಕಡತ ಸಂಖ್ಯೆ:ಕಅಅನಿ/ಹೊಯೊ/2022-23, ದಿನಾಂಕ:16.06.2022

-----

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ:16.06.2022ರ ಏಕ ಕಡತದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ ಇವರು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಮರುಪಾವತಿಯ ಹಣದಲ್ಲಿ NMDFC ಮಾದರಿಯಲ್ಲಿ ವ್ಯಾಪಾರ/ ಉದ್ದಿಮೆ ಸಾಲ ಯೋಜನೆಯನ್ನು ಅನುಷ್ಠಾನಗೊಳಿಸಲು ನಿರ್ದೇಶಕ ಮಂಡಳಿಯು ದಿನಾಂಕ:28-12-2021 ರಂದು ನಡೆದ 162 ನೇ ಸಭೆಯಲ್ಲಿ ನಿರ್ಣಯ ಕೈಗೊಂಡಿರುವುದಾಗಿ ತಿಳಿಸಿರುತ್ತಾರೆ.

ಸದರಿ ಯೋಜನೆಯಡಿ ಪ್ರತಿ ಫಲಾನುಭವಿಗೆ ವ್ಯಾಪಾರ /ಆರ್ಥಿಕ/ಸೇವಾ ಕ್ಷೇತ್ರ, ಕೃಷಿ ಆಧಾರಿತ ಚಟುವಟಿಕೆ ಕೈಗೊಳ್ಳಲು ರೂ.5.00 ಲಕ್ಷದಿಂದ ರೂ.20.00 ಲಕ್ಷದವರೆಗೆ ಗರಿಷ್ಠ ಸಾಲ ಸೌಲಭ್ಯ ನೀಡಲು ಉದ್ದೇಶಿಸಲಾಗಿದ್ದು, ಸದರಿ ಯೋಜನೆಯನ್ನು 2022-23 ನೇ ಸಾಲಿಗೆ ಸಾಲ ಮರು ಪಾವತಿಯಿಂದ ಲಭ್ಯವಾಗುವ ರೂ.10.00 ಕೋಟಿ ಮೊತ್ತದಲ್ಲಿ ಅನುಷ್ಠಾನಗೊಳಿಸಲು ಸರ್ಕಾರದ ಆದೇಶ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:MWD 51 MDC 2022, ಬೆಂಗಳೂರು, ದಿನಾಂಕ:05-07-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ಸಾಲ ಮರುಪಾವತಿ ಹಣದಲ್ಲಿ ಲಭ್ಯವಾಗುವ ರೂ.10.00 ಕೋಟಿ ಮೊತ್ತದಲ್ಲಿ NMDFC ಮಾದರಿಯಲ್ಲಿ 2022-23 ನೇ ಸಾಲಿಗೆ ವ್ಯಾಪಾರ / ಉದ್ದಿಮೆ ನೇರ ಸಾಲ ಯೋಜನೆಯನ್ನು ಅನುಬಂಧದಲ್ಲಿ ನಮೂದಿಸಿರುವ ಷರತ್ತುಗಳಿಗೆ ಒಳಪಟ್ಟು ಅನುಷ್ಠಾನಗೊಳಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

K M D C LTD.
Head Office, Bangalore
12 JUL 2022
No. ...........

(ಮುಕ್ತಾರ್ ಪಾಷ ಹೆಚ್.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ.

ಗೆ,

1) ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ವಿ.ವಿ.ಗೋಪುರ, ಬೆಂಗಳೂರು.

3) ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ವಸಂತನಗರ, ಬೆಂಗಳೂರು
4) ಎಲ್ಲಾ ಜಿಲ್ಲಾಧಿಕಾರಿಗಳು,
5) ಎಲ್ಲಾ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
6) ಜಂಟಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ವಸಂತನಗರ, ಬೆಂಗಳೂರು
7) ಜಂಟಿ ನಿರ್ದೇಶಕರು ರಾಜ್ಯ ಹುಜೂರ್ ಖಜಾನೆ ಇಲಾಖೆ, ಬೆಂಗಳೂರು
8) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 & 9), ವಿಧಾನ ಸೌಧ, ಬೆಂಗಳೂರು.
9) ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
10) ಸಮನ್ವಯ ಅಧಿಕಾರಿ, ಅಲ್ಪಸಂಖ್ಯಾತರ ಸಹಾಯವಾಣಿ ಕೇಂದ್ರ (24X7) ವಸಂತನಗರ, ಬೆಂಗಳೂರು.
11) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಸರ್ಕಾರಿ ಆದೇಶ ಸಂಖ್ಯೆ:MWD 51 MDC 2022, ಬೆಂಗಳೂರು, ದಿನಾಂಕ:05-07-2022 ಕ್ಕೆ ಅನುಬಂಧ**

## ವ್ಯಾಪಾರ/ಉದ್ದಿಮೆ ನೇರ ಸಾಲ ಯೋಜನೆಯ ಷರತ್ತುಗಳು

1. **ಯೋಜನೆಯ ಉದ್ದೇಶ** :

ಅಲ್ಪಸಂಖ್ಯಾತ ವರ್ಗದ ಜನರಿಗೆ ವ್ಯಾಪಾರ, ಉದ್ದಿಮೆ ಪ್ರಾರಂಭಿಸಲು ಅಥವಾ ಅಭಿವೃದ್ಧಿಪಡಿಸಿಕೊಳ್ಳುವ ಸಲುವಾಗಿ ಸಾಲವನ್ನು ನೀಡುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೆ ತರಲಾಗಿದೆ.

2. **ಅರ್ಹತೆಗಳು:**

1. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.
2. ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದವರಾಗಿರಬೇಕು.
3. ಅರ್ಜಿದಾರರ ವಯಸ್ಸು 18 ರಿಂದ 55 ವರ್ಷದೊಳಗಿರಬೇಕು.
4. ಅರ್ಜಿದಾರರು ಕೆ.ಎಂ.ಡಿ.ಸಿ. ಯಲ್ಲಿ ಸುಸ್ತಿದಾರರಾಗಿರಬಾರದು.
5. ನಿಗಮಕ್ಕೆ ಆಸ್ತಿ (ಕಟ್ಟಡ/ಜಮೀನು) ಅಡಮಾನದ ಮೇಲೆ ಮಾತ್ರ ಸಾಲ ಒದಗಿಸಲಾಗುವುದು. ಆಸ್ತಿಯ ಮೌಲ್ಯ ಸಾಲದ ಮೊತ್ತಕ್ಕಿಂತ ಕಡಿಮೆ ಇರಬಾರದು.
6. ವ್ಯಾಪಾರ ಉದ್ದಿಮೆ ಸಾಲವನ್ನು ಒಂದು ಕುಟುಂಬದ ಒಬ್ಬರಿಗೆ ಮಾತ್ರ ನೀಡಲಾಗುವುದು.

3. **ಸಾಲ ಮಂಜೂರಾತಿ**

ವ್ಯಾಪರ, ಉದ್ದಿಮೆ ಪ್ರಾರಂಭಿಸಲು ಅಥವಾ ಅಭಿವೃದ್ಧಿಪಡಿಸಲು ಫಲಾನುಭವಿಗೆ ರೂ.20.00 ಲಕ್ಷಗಳವರೆಗೆ ಸಾಲವನ್ನು ಈ ಕೆಳಕಂಡಂತೆ ಮಂಜೂರು ಮಾಡಲಾಗುವುದು.

- ಕುಟುಂಬದ ವಾರ್ಷಿಕ ಆದಾಯ ರೂ.8.00 ಲಕ್ಷ ಇರುವ ಫಲಾನುಭವಿಗಳಗೆ ರೂ.20.00 ಲಕ್ಷವರೆಗೆ ಸಾಲ ಶೇ 4% ಬಡ್ಡಿದರದಲ್ಲಿ ನೀಡಲಾಗುವುದು.
- ಕುಟಂಬದ ವಾರ್ಷಿಕ ಆದಾಯ ರೂ.8.00 ಲಕ್ಷದಿಂದ 15.00 ಲಕ್ಷವರೆಗೆ ಇರುವ ಫಲಾನುಭವಿಗಳಗೆ ರೂ.20.00 ಲಕ್ಷವರೆಗೆ ಸಾಲವನ್ನು ಶೇ.6%ರ ಬಡ್ಡಿದರದಲ್ಲಿ ನೀಡಲಾಗುವುದು.

4. **ಫಲಾನುಭವಿಗಳ ಆಯ್ಕೆ.**

1. ನಿಗದಿಪಡಿಸಿದ ಅರ್ಹತೆಗಳನ್ನು ಹೊಂದಿರುವ ಅರ್ಜಿದಾರರು ಅರ್ಜಿಗಳನ್ನು ಆನ್ ಲೈನ್ ಮುಖಾಂತರ ನಿಗಮಕ್ಕೆ ಸಲ್ಲಿಸಬೇಕು.
2. ನಿಗಮಕ್ಕೆ ಆನ್ ಲೈನ್ ಮೂಲಕ ಸಲ್ಲಿಕೆಯಾಗಿರುವ ಎಲ್ಲಾ ಅರ್ಜಿದಾರರ ಅರ್ಜಿಗಳನ್ನು ಪರಿಶೀಲನಾ ಸಮಿತಿಯಿಂದ ಪರಿಶೀಲನೆ ಮಾಡಿದ ನಂತರ ಅರ್ಹ ಫಲಾನುಭವಿಗಳನ್ನು ಸಾಲ ಮಂಜೂರಾತಿಗಾಗಿ ಆಯ್ಕೆ ಮಾಡಲಾವುದು.

5. **ಪರಿಶೀಲನಾ ಸಮಿತಿ**

ಯೋಜನೆಯಡಿ ವ್ಯಾಪಾರ/ಉದ್ದಿಮೆಗಾಗಿ ಅರ್ಜಿಗಳನ್ನು ಸಲ್ಲಿಸಿರುವ ಫಲಾನುಭವಿಗಳ ಆಯ್ಕೆಗಾಗಿ ಈ ಕೆಳಗಿನಂತೆ ಪರಿಶೀಲನಾ ಸಮಿತಿಯನ್ನು ರಚಿಸುವುದು.

1. ವ್ಯವಸ್ಥಾಪಕ ನಿರ್ದೇಶಕರು –ಅಧ್ಯಕ್ಷರು
2. ಅಧೀನ ಕಾರ್ಯದರ್ಶಿಗಳು –ಸದಸ್ಯರು.
   ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ
3. ಜಂಟಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ – ಸದಸ್ಯರು
4. ಪ್ರಧಾನ ವ್ಯವಸ್ಥಾಪಕರು, ಕ.ಅ.ಅ.ನಿ. –ಸದಸ್ಯ ಕಾರ್ಯದರ್ಶಿ

6. **ಸಾಲದ ಮರುಪಾವತಿ**

1. ಉದ್ದಿಮೆ/ವ್ಯಾಪಾರ ಪ್ರಾರಂಭಿಸಿದ ಕೂಡಲೇ ಅಥವಾ ಸಾಲ ಪಡೆದ ಮೂರು ತಿಂಗಳ ನಂತರ ನಿಗದಿಪಡಿಸಿದ ಬಡ್ಡಿದರದಲ್ಲಿ 60 ತಿಂಗಳ ಸಮಾನ ಕಂತುಗಳಲ್ಲಿ ಸಾಲವನ್ನು ಮರುಪಾವತಿ ಮಾಡಬೇಕಾಗಿದೆ.
2. ಫಲಾನುಭವಿಯು ನಿಗದಿತ ಕಂತುಗಳಲ್ಲಿ ಸಾಲವನ್ನು ಕಟ್ಟದಿದ್ದರೆ ಶೇ.2% ದಂಡದ ಬಡ್ಡಿಯನ್ನು (Penal Interest) ವಿಧಿಸಲಾವುದು.

**(ಮುಕ್ತಾರ್ ಪಾಷ ಹೆಚ್.ಜಿ)** 5/7/22

ಸರ್ಕಾರದ ಅಧೀನ ಕಾರ್ಯದರ್ಶಿ

ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ.